. ಕರ್ನಾಟಕ ಸರ್ಕಾರ

**ನಿರ್ದೇಶಕರ ಕಛೇರಿ ಪದವಿ ಪೂರ್ವ ಶಿಕ್ಷಣ ಇಲಾಖೆ 18 ನೇ ಕ್ರಾಸ್ ಸಂಪಿಗೆ ರಸ್ತೆ ಮಲ್ಲೇಶ್ವರಂ ಬೆಂಗಳೂರು-12**

ಸಂಖ್ಯೆ: ಪಿಯು-01/3026/ಸಿಬ್ಬಂದಿ/ಸಿಆರ್-04/ಎನ್‌ಓಸಿ/2016-17 ದಿನಾಂಕ: 31/08/2017

## ಜ್ಞಾಪನ

**ವಿಷಯ:** ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಉಪನ್ಯಾಸಕರಿಗೆ ವಿವಿಧ ಹುದ್ದೆಗಳಿಗೆ ಅರ್ಜಿ ಸಲ್ಲಿಸಲು ಅನುಮತಿ ನೀಡುವ ಕುರಿತು.

**ಉಲ್ಲೇಖ:** 1. ಜಿಲ್ಲಾ ಉಪ ನಿರ್ದೇಶಕರು, ಬಳ್ಳಾರಿ ಜಿಲ್ಲೆ ಇವರ ಪತ್ರದ ಸಂಖ್ಯೆ:
ಪಪೂಶಿಇ;ಸಿಸಿ:ಸ.ಪ್ರಾ.ಹು:ಅನುಮ:210:2017-18 ದಿನಾಂಕ: 22-08-2017
(ಸ್ವೀಕೃತಿ:31-08-2017)
2. ಜಿಲ್ಲಾ ಉಪ ನಿರ್ದೇಶಕರು, ಬಳ್ಳಾರಿ ಜಿಲ್ಲೆ ಇವರ ಪತ್ರದ ಸಂಖ್ಯೆ:
ಪಪೂಶಿಇ:ಸಿಸಿ:ಉಪನ್ಯಾ.ನಿ.ಪತ್ರ:216:17-18 ದಿನಾಂಕ: 24-08-2017
(ಸ್ವೀಕೃತಿ:31-08-2017)

***

ಈ ಕೆಳಕಂಡ ಉಪನ್ಯಾಸಕರಿಗೆ ವಿಜಯನಗರ ಶ್ರೀಕೃಷ್ಣದೇವರಾಯ ವಿಶ್ವವಿದ್ಯಾನಿಲಯ ಹಾಗೂ ಕೆ.ಪಿ.ಎಸ್.ಸಿ.ಯಿಂದ ಕರೆದಿರುವ ವಿವಿಧ ಹುದ್ದೆಗಳಿಗೆ ಅರ್ಜಿ ಸಲ್ಲಿಸಲು ಅನುಮತಿ ನೀಡುವಂತೆ ಜಿಲ್ಲಾ ಉಪ ನಿರ್ದೇಶಕರು ಉಲ್ಲೇಖಿತ ಪತ್ರಗಳಂತೆ ಕೋರಿರುತ್ತಾರೆ. ಸದರಿ ಪ್ರಸ್ತಾವನೆಗಳನ್ನು ಪರಿಶೀಲಿಸಿದ್ದು, ಈ ಕೆಳಕಂಡ ಉಪನ್ಯಾಸಕರ ಹೆಸರಿನ ಮುಂದೆ ತೋರಿಸಿರುವ ಪರೀಕ್ಷೆ/ಹುದ್ದೆಗೆ ಅರ್ಜಿ ಸಲ್ಲಿಸಲು ಕೆಳಕಂಡ ಷರತ್ತುಗಳಿಗೆ ಒಳಪಟ್ಟು ಅನುಮತಿ ನೀಡಿದೆ.

| ಕ್ರ ಸಂ | ಉಪನ್ಯಾಸಕರ/ಬೋಧಕೇತರ ಸಿಬ್ಬಂದಿಯ ಹೆಸರು ಮತ್ತು ವಿಳಾಸ | ಹುದ್ದೆ/ಪರೀಕ್ಷೆಯ ಹೆಸರು |
|---|---|---|
| 1 | ಶ್ರೀಮತಿ ಪರ್ವೀನ್ ಬೇಗಂ,<br>ಶಿಕ್ಷಣಶಾಸ್ತ್ರ ಉಪನ್ಯಾಸಕರು,<br>ಸರ್ಕಾರಿ ಪದವಿ ಪೂರ್ವ ಕಾಲೇಜು, ಗುಡೇಕೋಟೆ,<br>ಕೂಡ್ಲಿಗಿ ತಾ॥ ಬಳ್ಳಾರಿ ಜಿಲ್ಲೆ. | ವಿಜಯನಗರ ಶ್ರೀಕೃಷ್ಣದೇವರಾಯ ವಿಶ್ವವಿದ್ಯಾಲಯ, ಬಳ್ಳಾರಿ ಇವರು ಕರೆದಿರುವ ಶಿಕ್ಷಣ ಶಾಸ್ತ್ರ ಸಹಾಯಕ ಪ್ರಾಧ್ಯಾಪಕರ ಹುದ್ದೆ |
| 2 | ಶ್ರೀ ರಾಘವೇಂದ್ರ ಬಿ., ಇಂಗ್ಲೀಷ್ ಉಪನ್ಯಾಸಕರು,<br>ಸರ್ಕಾರಿ ಪದವಿ ಪೂರ್ವ ಕಾಲೇಜು, ತೆಕ್ಕಲಕೋಟೆ,<br>ಸಿರುಗುಪ್ಪ ತಾ॥ ಬಳ್ಳಾರಿ ಜಿಲ್ಲೆ. | ಕೆಪಿಎಸ್‌ಸಿ ಕರೆದಿರುವ ಅಲ್ಪಸಂಖ್ಯಾತರ ಕಲ್ಯಾಣ ನಿರ್ದೇಶನಾಲಯದ ಮೊರಾರ್ಜಿ ದೇಸಾಯಿ ವಸತಿ ಶಾಲೆಗಳಲ್ಲಿ ಪ್ರಾಂಶುಪಾಲರ ಹುದ್ದೆಗಳಿಗೆ |
| 3 | ಶ್ರೀ ಶ್ರೀಕಾಂತ, ಗಣಿತ ಉಪನ್ಯಾಸಕರು,<br>ಸರ್ಕಾರಿ ಪದವಿ ಪೂರ್ವ ಕಾಲೇಜು, ತೆಕ್ಕಲಕೋಟೆ,<br>ಸಿರುಗುಪ್ಪ ತಾ॥ ಬಳ್ಳಾರಿ ಜಿಲ್ಲೆ. | ಕೆಪಿಎಸ್‌ಸಿ ಕರೆದಿರುವ ಅಲ್ಪಸಂಖ್ಯಾತರ ಕಲ್ಯಾಣ ನಿರ್ದೇಶನಾಲಯದ ಮೊರಾರ್ಜಿ ದೇಸಾಯಿ ವಸತಿ ಶಾಲೆಗಳಲ್ಲಿ ಪ್ರಾಂಶುಪಾಲರ ಹುದ್ದೆಗಳಿಗೆ |

1. ಸದರಿ ಪರೀಕ್ಷೆಗೆ ಸಂಬಂಧಿಸಿದಂತೆ ಅಧ್ಯಯನವನ್ನು ತಮ್ಮ ಸ್ವಂತ ಖರ್ಚಿನಲ್ಲಿ ಕೈಗೊಳ್ಳತಕ್ಕದ್ದು. ಸದರಿಯವರ ಪರೀಕ್ಷೆಯ ಅಧ್ಯಯನದ ನಿಮಿತ್ತ ಸರ್ಕಾರ/ಇಲಾಖೆಗೆ ಯಾವುದೇ ಆರ್ಥಿಕ ಹೊರೆ ಉಂಟಾಗತಕ್ಕದ್ದಲ್ಲ.
2. ಕಛೇರಿ ಕೆಲಸ ಕಾರ್ಯಗಳಿಗೆ ತೊಂದರೆ ಉಂಟಾಗದಂತೆ ಬಿಡುವಿನ ವೇಳೆಯಲ್ಲಿ ಸದರಿ ಪರೀಕ್ಷೆಯ ಅಧ್ಯಯನಕ್ಕೆ ಬೇಕಾದ ಸಿದ್ಧತೆ ಮಾಡಿಕೊಳ್ಳತಕ್ಕದ್ದು.
3. ಪರೀಕ್ಷೆಯ ಅಧ್ಯಯನದ ನಿಮಿತ್ತ ವರ್ಗಾವಣೆ, ಕೋರುವಂತಿಲ್ಲ ಅಥವಾ ಅವರ ಪರೀಕ್ಷೆಯ ಅಧ್ಯಯನ ಸರ್ಕಾರದ/ಇಲಾಖೆಯ ವರ್ಗಾವಣೆಗೆ ಅಡ್ಡಿಬರುವಂತಿಲ್ಲ.
4. ಸದರಿಯವರು ಬೇರೆ ಯಾವುದೇ ಇಲಾಖೆಯ ಹುದ್ದೆಗೆ ಆಯ್ಕೆಯಾದಲ್ಲಿ ಈಗ ಕಾರ್ಯ ನಿರ್ವಹಿಸುತ್ತಿರುವ ಹುದ್ದೆಯಿಂದ ಬಿಡುಗಡೆ ಹೊಂದುವ ಮೊದಲು ಇಲಾಖೆಯ ಅನುಮತಿ ಪಡೆಯುವುದು.

31/8/17

ಜಂಟಿ ನಿರ್ದೇಶಕರು (ಆಡಳಿತ)
ಪದವಿ ಪೂರ್ವ ಶಿಕ್ಷಣ ಇಲಾಖೆ

**ಪ್ರತಿಗಳು:**

1. ಜಿಲ್ಲಾ ಉಪ ನಿರ್ದೇಶಕರಿಗೆ ಮಾಹಿತಿಗಾಗಿ.
2. ಸಂಬಂಧಿಸಿದ ಉಪನ್ಯಾಸಕರುಗಳಿಗೆ ಪ್ರಾಂಶುಪಾಲರ ಮುಖಾಂತರ.
3. ಸಹಾಯಕ ನಿರ್ದೇಶಕರು, ಇ-ಆಡಳಿತ ಇವರಿಗೆ ಇಲಾಖೆಯ ಅಂತರ್ಜಾಲದಲ್ಲಿ ಅಳವಡಿಸಲು
4. ಜ್ಞಾಪನ ಕಡತ.